ಸಂಕೇತ ಸಂಖ್ಯೆ : **01-K** ವಿಷಯ : **ಪ್ರಥಮ ಭಾಷೆ — ಕನ್ನಡ**

**Code No. : 01-K Subject : First Language — KANNADA**

**( ಹೊಸ ಪಠ್ಯಕ್ರಮ / New Syllabus )**

**( ಖಾಸಗಿ ಅಭ್ಯರ್ಥಿ / Private Fresh )**

***ಸಾಮಾನ್ಯ ಸೂಚನೆಗಳು :***

i) ಈ ಪ್ರಶ್ನೋತ್ತರ ಕಿರು ಪುಸ್ತಕವು ಮೂರು ವಿಭಾಗಗಳನ್ನು ಹೊಂದಿದೆ.

ii) **ವಿಭಾಗ 'ಎ'**ಯಲ್ಲಿ ಗದ್ಯ, ಪದ್ಯ ಮತ್ತು ಪೋಷಕ ಅಧ್ಯಯನಗಳ 92 ಅಂಕಗಳ ಒಟ್ಟಾರೆ 45 ಪ್ರಶ್ನೆಗಳಿವೆ.

iii) **ವಿಭಾಗ 'ಬಿ'**ಯಲ್ಲಿ ವ್ಯಾಕರಣ, ಛಂದಸ್ಸು ಮತ್ತು ಅಲಂಕಾರಗಳ 20 ಅಂಕಗಳ ಒಟ್ಟಾರೆ 16 ಪ್ರಶ್ನೆಗಳಿವೆ.

iv) **ವಿಭಾಗ 'ಸಿ'**ಯಲ್ಲಿ ವಾಕ್ಯರಚನೆ ಹಾಗೂ ಬರೆವಣಿಗೆ ಕೌಶಲಗಳ 13 ಅಂಕಗಳ ಒಟ್ಟಾರೆ 3 ಪ್ರಶ್ನೆಗಳಿವೆ.

v) ಸೂಚನೆಗೆ ಅನುಸಾರ ಪ್ರತೀ ಪ್ರಶ್ನೆಗೂ ಉತ್ತರವನ್ನು, ಉತ್ತರಕ್ಕಾಗಿ ಮೀಸಲಿಟ್ಟ ಆಯಾ ಜಾಗದಲ್ಲೇ ಬರೆಯಬೇಕು.

vi) ಛಂದಸ್ಸನ್ನು ಹೊರತುಪಡಿಸಿ ಉಳಿದೆಲ್ಲೂ ಸೀಸದ ಕಡ್ಡಿ (ಪೆನ್ಸಿಲ್) ಯಲ್ಲಿ ಉತ್ತರ ಬರೆಯುವಂತಿಲ್ಲ. ಹಾಗೇನಾದರೂ ಬರೆದರೆ ಮೌಲ್ಯಮಾಪನಕ್ಕೆ ಪರಿಗಣಿಸುವುದಿಲ್ಲ.

vii) ಉತ್ತರಗಳು ನೇರವೂ, ಸ್ಪಷ್ಟವೂ ಆಗಿರಲಿ.

viii) ಪ್ರಶ್ನೆ ಪತ್ರಿಕೆಯನ್ನು ಓದಿ ಅರ್ಥೈಸಿಕೊಳ್ಳಲು 15 ನಿಮಿಷಗಳ ಹೆಚ್ಚಿನ ಕಾಲಾವಕಾಶ ನೀಡಲಾಗಿದೆ.

ix) ನಿಮ್ಮ ಪ್ರಶ್ನೋತ್ತರ ಕಿರುಪುಸ್ತಕದ ಬಲಭಾಗದಲ್ಲಿರುವ ಗೆರೆಯ ಪಕ್ಕದ ಖಾಲಿ ಜಾಗದಲ್ಲಿ ಯಾವುದೇ ರೀತಿಯ ಬರಹಗಳನ್ನು ಬರೆಯಬಾರದು.

## ವಿಭಾಗ – 'ಎ'

### (ಪಠ್ಯಗಳ ಅಧ್ಯಯನ – ಗದ್ಯ, ಪದ್ಯ, ಪೋಷಕ ಅಧ್ಯಯನ)

ಈ ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ***ಒಂದೊಂದು*** ವಾಕ್ಯದಲ್ಲಿ ಉತ್ತರಿಸಿ : $16 \times 1 = 16$

1. ಮತಂಗಾಶ್ರಮದಲ್ಲಿದ್ದ ತಪಸ್ವಿನಿ ಯಾರು ?
2. ಬುಕ್ಕರಾಯನು ವಿಧಿಸಿದ ಕಟ್ಟಳೆಯನ್ನು ಮೀರಿದರೆ ಆಗುವ ಪರಿಣಾಮವೇನು ?
3. ಮನೆಮಂಚಮ್ಮನ ಕತೆ ಹೇಳಿದ ಕವಿ ಯಾರು ?
4. ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ ಯಾವ ಆರೋಪವನ್ನು ಹೊರಿಸಿದನು ?
5. ಶಾನುಭೋಗರ ಬ್ರಹ್ಮಾಸ್ತ್ರ ಯಾವುದು ?
6. ಕಾಲಪಕ್ಷಿಯ ಕಣ್ಣುಗಳು ಯಾವುವು ?
7. ಕುದುರೆಯನ್ನು ಲವನು ಯಾವುದರಿಂದ ಕಟ್ಟಿದನು ?
8. ಮಾನವನ ಕಾದಾಟಕ್ಕೆ ಕಾರಣವೇನೆಂದು ದು. ಸರಸ್ವತಿ ಹೇಳಿದ್ದಾರೆ ?
9. ಭರತ ಚಕ್ರವರ್ತಿಯು ತನ್ನ ಗೆಲುವಿನ ಶಾಸನವನ್ನು ಎಲ್ಲಿ ಬರೆಸಲು ಹೋಗುತ್ತಾನೆ ?
10. ಅಂದವಾದ ಬರವಣಿಗೆಯ ಬಗ್ಗೆ ಗಾಂಧಿಯವರ ಅಭಿಪ್ರಾಯವೇನು ?
11. ಮುದ್ದು ಪಾರಿವಾಳಗಳ ಜೋಡಿ ಎಲ್ಲಿ ಸಂಸಾರ ಹೂಡಿತ್ತು ?
12. ಅಮೆರಿಕದ ವಿದ್ಯಾರ್ಥಿಗಳನ್ನು ರಂಜಿಸಿದ ಕನ್ನಡ ಸಾಹಿತ್ಯ ಭಾಗಗಳು ಯಾವುವು ?
13. ಅಂತರ್‌ಜೀವಿಗೆ ಯಾವುದು ದೊಡ್ಡ ಸಮಸ್ಯೆಯಾಗುತ್ತದೆ ?
14. ಗಾಂಡೀವಿ ಎಂದು ಅರ್ಜುನನನ್ನು ಏಕೆ ಕರೆಯುತ್ತಾರೆ ?
15. ಜಿ.ಎಸ್. ಶಿವರುದ್ರಪ್ಪ ಅವರ ಪ್ರಕಾರ ಯಾವ ಎಚ್ಚರದೊಳು ಬದುಕಬೇಕಿದೆ ?
16. ವಿಸ್ತಾರವಾದ ಬಿಳಿಯ ಕೊಳ ಎಲ್ಲಿದೆ ?

ಈ ಕೆಳಗಿನ ಪ್ರಶ್ನೆಗಳಿಗೆ ***ಮೂರು ಅಥವಾ ನಾಲ್ಕು*** ವಾಕ್ಯಗಳಲ್ಲಿ ಉತ್ತರ ಬರೆಯಿರಿ : $16 \times 2 = 32$

17. ಜೈನಧರ್ಮದ ಸುಧಾರಣೆಗಾಗಿ ಬುಕ್ಕರಾಯನು ಕೈಗೊಂಡ ಕ್ರಮಗಳೇನು ?
18. ನೆಹರೂ ಅವರು ಸರ್ ಎಂ. ವಿಶ್ವೇಶ್ವರಯ್ಯ ಅವರ ಬಗ್ಗೆ ಏನೆಂದು ಹೇಳಿದ್ದಾರೆ ?

19. ಹೈದರಾಬಾದ್ ನಗರದಲ್ಲಿ ವಿಶ್ವೇಶ್ವರಯ್ಯ ಅವರು ಸಲ್ಲಿಸಿದ ಸೇವೆ ಯಾವುದು ?

20. ಪರಮಹಂಸರ ವ್ಯಕ್ತಿತ್ವದ ವೈಶಿಷ್ಟ್ಯ ಎಂಥದ್ದು ?

21. ದುರ್ಯೋಧನನಿಗೆ ಗಾಂಧಾರಿ ನೀಡಿದ ಉಪದೇಶವೇನು ?

22. ಸಂಧಿಯೇ ಉಚಿತವೆಂದು ಧೃತರಾಷ್ಟ್ರನು ಹೇಗೆ ಸಮರ್ಥಿಸಿದನು ?

23. ಗಡಿಯ ಆಚೆ–ಈಚೆ ಜೀವಿಗಳು ಏಕೆ ಶವವಾದವು ?

24. ವಿಜ್ಞಾನಿಗಳ ವೈರುಧ್ಯ ಭಾವನೆಯನ್ನು ತಿಳಿಸಿ.

25. 'ಅಂಗಿ' ಎಂಬ ಉತ್ತರ ಬರಲು ಹೇಳಿದ ಒಗಟು ಯಾವುದು ?

26. ಶಬರಿಯು ರಾಮಲಕ್ಷ್ಮಣರನ್ನು ಉಪಚರಿಸಿದ ರೀತಿಯನ್ನು ತಿಳಿಸಿ.

27. 'ಧರ್ಮಸಮದೃಷ್ಟಿ' ಪಾಠದಲ್ಲಿ ರಾಮಾನುಜಾಚಾರ್ಯರ ಗುಣವಿಶೇಷತೆಯನ್ನು ಹೇಗೆ ಕೊಂಡಾಡಲಾಗಿದೆ ?

28. ಹುಲಿಯು ಹಿಂದಿನಿಂದ ಹಾರಿ ಕೊಲ್ಲದಿರಲು ಕಾರಣಗಳೇನು ?

29. ಹೊಸಗಾಲದ ಹಸುಮಕ್ಕಳನ್ನು ಹಕ್ಕಿ ಹೇಗೆ ಹರಸಿದೆ ?

30. ಮಾತಿನ ಮಹತ್ತ್ವವನ್ನು ಬಸವಣ್ಣನವರು ಹೇಗೆ ವಿಶ್ಲೇಷಿಸಿದ್ದಾರೆ ?

31. ಸಂಕಟಕೆ ಗಡಿ ಇಲ್ಲ, ಏಕೆ ?

32. ರಾಜಕೀಯ ಸ್ವಾತಂತ್ರ್ಯದ ಮಹತ್ತ್ವವೇನು ?

ಈ ಕೆಳಗಿನ ವಾಕ್ಯಗಳ ಸಂದರ್ಭವನ್ನು ಸ್ವಾರಸ್ಯದೊಂದಿಗೆ ವಿವರಿಸಿ : $6 \times 3 = 18$

33. "ಬೆಳಕಿಗೊಲಿದವರ್ ಉರಿವ ಬತ್ತಿಯ ಕರುಕ ಕಾಣರು."

34. "ಪ್ರಕೃತಿ ವಿಕೃತಿಯಾದ ಮನುಷ್ಯನಾಯುಷ್ಯಂ ಕುಂದುಗುಂ"

35. "ಸೌರ್ವಭೌಮರಾ ನೆತ್ತಿಯ ಕುಕ್ಕಿ"

36. "ಜೀವ ಸತ್ತು ಹೋಗುವುದು ಗೊತ್ತ."

37. "ಹಾಗಾದರೆ ಎಲ್ಲರಿಗೂ ಮನೆ ಆಗುವವರೆಗೆ ನನಗೂ ಮನೆ ಬೇಡ."

38. "ಹೊಡೆದರೊ ಗುಂಡ ಕರುಣ ಇಲ್ಲದ್ಹಂಗ."

ಈ ಕೆಳಗಿನ ಕವಿಗಳ / ಸಾಹಿತಿಗಳ ಸ್ಥಳ, ಕಾಲ, ಕೃತಿ ಮತ್ತು ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ : $2 \times 3 = 6$

39. ಎ.ಎನ್. ಮೂರ್ತಿರಾವ್

40. ಲಕ್ಷ್ಮೀಶ

41. ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ : $1 \times 4 = 4$

ಕಲುಷಿತವಾದೀ ______________________________

______________________________ಮುಟ್ಟೋಣ.

***ಅಥವಾ***

ಮತಗಳೆಲ್ಲವೂ ______________________________

______________________________ಬಿತ್ತೋಣ.

42. ಈ ಕೆಳಗಿನ ಪದ್ಯಭಾಗವನ್ನು ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ : $4 \times 1 = 4$

ಮರನನೇರಿದ ಮರ್ಕಟನಂತೆ
ಹಲವು ಕೊಂಬೆಗೆ ಹಾಯುತಲಿದೆ
ಬೆಂದಮನದ ನಾನೆಂತು ನಂಬುವೆನಯ್ಯಾ ?
ಎಂತು ನಚ್ಚುವೆನಯ್ಯಾ ?
ಎನ್ನ ತಂದೆ ಕೂಡಲಸಂಗಮದೇವನಲ್ಲಿಗೆ ಹೋಗಲೀಯದಯ್ಯಾ

*ಪ್ರಶ್ನೆಗಳು :*

ಅ) ಈ ವಚನದಲ್ಲಿ ನೀವು ಮೆಚ್ಚುವ ಸಾಲು ಯಾವುದು ?

ಆ) ನೀವು ಆ ಸಾಲನ್ನು ಮೆಚ್ಚಲು ಕಾರಣವೇನು ?

ಇ) ಈ ವಚನದಿಂದ ನಿಮ್ಮಲ್ಲಿ ಮೂಡಿದ ಭಾವನೆಯೇನು ?

ಈ) ಬಸವಣ್ಣನವರು 'ಎಂತು ನಚ್ಚುವೆನಯ್ಯಾ' ಎಂದು ಪ್ರಶ್ನಿಸಲು ಕಾರಣವೇನು ?

ಈ ಕೆಳಗಿನ ಪ್ರಶ್ನೆಗಳಿಗೆ ***ಎಂಟು*** ಅಥವಾ ***ಹತ್ತು*** ವಾಕ್ಯಗಳಲ್ಲಿ ಉತ್ತರ ಬರೆಯಿರಿ : $2 \times 4 = 8$

43. ಗೊರೂರು ರಾಮಸ್ವಾಮಿ ಅಯ್ಯಂಗಾರರ ವೇಷಭೂಷಣಗಳು ಹೇಗಿದ್ದವು ?

***ಅಥವಾ***

ವಿದ್ಯುತ್ ಒಲೆಯಿಂದ ಉಂಟಾದ ಅಪಾಯವನ್ನು ಗೊರೂರರು ಹೇಗೆ ಪರಿಹರಿಸಿಕೊಂಡರು ?

44. ಕರ್ಣನಿಗೆ ಶ್ರೀಕೃಷ್ಣನು ಒಡ್ಡಿದ ಆಮಿಷಗಳೇನು ?

*ಅಥವಾ*

ಪಾಂಡವರು ಸೋದರರರೆಂದು ತಿಳಿದಾಗ ಕರ್ಣನ ಮನಸ್ಥಿತಿಯನ್ನು ತಿಳಿಸಿ.

ಈ ಕೆಳಗಿನ ಗದ್ಯಭಾಗವನ್ನು ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ : $2 \times 2 = 4$

45. ಇಲ್ಲಿ ಎಲ್ಲಾ ಧರ್ಮಗಳೂ ಹಾಕಿಕೊಟ್ಟ ಒಂದು ರತ್ನಪಾಠವಿದೆ. ಸಾಧಕನಿಗೆ, ಅಂತರ್‌ಜೀವಿಗೆ – ಯಾವ ತೊಂದರೆಯೂ ಆಗಬಾರದೆಂದು ಎಲ್ಲಾ ಧರ್ಮಗಳೂ ಅವನನ್ನು ಸಮಾಜವೇ ನೋಡಿಕೊಳ್ಳಬೇಕೆಂದು ಹೇಳಿವೆ. ಧರ್ಮಶಾಲೆಗಳು, ವಿಹಾರಗಳು, ಅನ್ನಛತ್ರಗಳು – ಇವು ಏರ್ಪಟ್ಟಿರುವುದು ಇಂಥವರಿಗಾಗಿ ಹಾಗೂ ನಿರ್ಗತಿಕರಿಗಾಗಿ ಅನೇಕ ದೇವಸ್ಥಾನಗಳಲ್ಲಿಯೂ, ಮಠಗಳಲ್ಲಿಯೂ ಇಂಥ ಏರ್ಪಾಟಿದೆ. ಇಂಥ ಸಾಧಕರನ್ನು ಮನೆಯಲ್ಲಿಟ್ಟುಕೊಂಡು ಅವರ ಯೋಗಕ್ಷೇಮವನ್ನು ನೋಡಿಕೊಂಡವರೂ ಉಂಟು.

ಇದು ಸಮಾಜದ ಕರ್ತವ್ಯವಾಯಿತು. ಆದರೆ ಸಾಧಕನ ಕರ್ತವ್ಯವೇನು ? ಇನ್ನೊಬ್ಬರ ಮೇಲೆ ಅವನೆಂದಿಗೂ ಭಾರ ಹಾಕಿರಬಾರದು. ಇನ್ನೊಬ್ಬರು ತಾವಾಗಿಯೇ ಕೈಯೆತ್ತಿಕೊಡದೆ ಅವನು ಏನನ್ನೂ ಸ್ವೀಕರಿಸಬಾರದು. ದಾತೃವಿನ ಮನವನ್ನು ಹತ್ತುಸಲ ಪರೀಕ್ಷಿಸಿ ದಾನವನ್ನು ಸ್ವೀಕರಿಸಬೇಕು. ಕೇಳಿ ದೊರಕಿಸಿಕೊಂಡ ಸಾಮಗ್ರಿ – ಸೌಕರ್ಯಗಳ ಮೇಲೆ ನಿಂತ ಸಾಧನೆ – ತಪಸ್ಸು, ಮರವನ್ನು ಆಶ್ರಯಿಸಿ ಬೆಳೆದ ಬಳ್ಳಿಯಂತೆ ಅದಕ್ಕೆ ಸ್ವಯಂಪೂರ್ಣತೆ ಇಲ್ಲ.

*ಪ್ರಶ್ನೆಗಳು :*

ಅ) ಅಂತರ್‌ಜೀವಿಗೆ ತೊಂದರೆಯಾಗಬಾರದೆಂದು ಸಮಾಜವು ತನ್ನ ಕರ್ತವ್ಯವನ್ನು ಹೇಗೆ ನಿರ್ವಹಿಸಿದೆ ?

ಆ) ಸಾಧಕನ ಕರ್ತವ್ಯದಲ್ಲಿ ಸ್ವಯಂಪೂರ್ಣತೆ ಯಾವಾಗ ಇರುತ್ತದೆ ?

## ವಿಭಾಗ – 'ಬಿ'

### (ಅನ್ವಯಿಕ ವ್ಯಾಕರಣ, ಅಲಂಕಾರ, ಛಂದಸ್ಸು)

ಈ ಕೆಳಗಿನ ಹೇಳಿಕೆ / ಅಪೂರ್ಣ ವಾಕ್ಯಗಳಿಗೆ ಪ್ರತಿಯೊಂದಕ್ಕೂ ನಾಲ್ಕು ಆಯ್ಕೆಗಳನ್ನು ಕೊಡಲಾಗಿದೆ, ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಂದಿಗೆ ಬರೆಯಿರಿ : $10 \times 1 = 10$

46. 'ಜನೈಕ್ಯ' ಪದದಲ್ಲಿ ಏರ್ಪಟ್ಟಿರುವ ಸಂಧಿ

(ಎ) ಗುಣ (ಬಿ) ಶ್ಚುತ್ವ

(ಸಿ) ವೃದ್ಧಿ (ಡಿ) ಯಣ್

47. ಒಬ್ಬರು ಹೇಳಿದ ಮಾತನ್ನೇ ಯಥಾವತ್ತಾಗಿ ಬರೆಯುವಾಗ ಈ ಲೇಖನ ಚಿಹ್ನೆಯನ್ನು ಬಳಸಲಾಗುವುದು

(ಎ) ವಾಕ್ಯವೇಷ್ಟನ (ಬಿ) ಆವರಣ

(ಸಿ) ಅಲ್ಪವಿರಾಮ (ಡಿ) ಉದ್ಧರಣ

48. ಕ್ರಿಯಾ ಸಮಾಸಕ್ಕೆ ಉದಾಹರಣೆ ಇದು

(ಎ) ಈ ಬೆಕ್ಕು (ಬಿ) ಕಂಗೆಡು

(ಸಿ) ಹಿಂದಲೆ (ಡಿ) ಇಮ್ಮಾವು

49. ಸ್ವತಂತ್ರ ವಾಕ್ಯಗಳಾಗಿ ನಿಲ್ಲಬಲ್ಲ ಅನೇಕ ಉಪವಾಕ್ಯಗಳೊಡನೆ ಒಂದು ಪೂರ್ಣಾಭಿಪ್ರಾಯದ ವಾಕ್ಯವಾಗಿದ್ದರೆ ಅದು

(ಎ) ಸಂಯೋಜಿತ ವಾಕ್ಯ (ಬಿ) ಸಾಮಾನ್ಯ ವಾಕ್ಯ

(ಸಿ) ಮಿಶ್ರವಾಕ್ಯ (ಡಿ) ಪ್ರಶ್ನಾರ್ಥಕ ವಾಕ್ಯ

50. 'ಅನ್ವರ್ಥನಾಮ' ಪದಗಳ ಗುಂಪಿಗೆ ಸೇರುವ ಪದವಿದು

(ಎ) ಕೆಂಪು (ಬಿ) ವಿದ್ವಾಂಸ

(ಸಿ) ಈಶಾನ್ಯ (ಡಿ) ಪರ್ವತ

51. ಕ್ರಿಯಾರ್ಥಕ ಅವ್ಯಯಕ್ಕೆ ಉದಾಹರಣೆ ಇದು

(ಎ) ಉಂಟು (ಬಿ) ಭಳಿಕೆ

(ಸಿ) ಅಥವಾ (ಡಿ) ರೊಯ್ಯನೆ

52. 'ತಾಲ್ಲೂಕು' ಪದವು ಕನ್ನಡಕ್ಕೆ ಈ ಭಾಷೆಯಿಂದ ಬಂದಿದೆ

(ಎ) ಇಂಗ್ಲಿಷ್ (ಬಿ) ಪೋರ್ಚುಗೀಸ್

(ಸಿ) ಅರಬ್ಬಿ (ಡಿ) ಉರ್ದು

53. ಕರ್ಮಾರ್ಥದ ಕಾರಕವನ್ನು ಈ ವಿಭಕ್ತಿಯಿಂದ ಗುರುತಿಸಲಾಗುವುದು

(ಎ) ದ್ವಿತೀಯಾ (ಬಿ) ಸಪ್ತಮಿ

(ಸಿ) ತೃತೀಯಾ (ಡಿ) ಪಂಚಮಿ

54. ನಿಷೇದಾರ್ಥಕ ಕ್ರಿಯಾಪದಕ್ಕೆ ಉದಾಹರಣೆ ಇದು

(ಎ) ತಿನ್ನಲಿ (ಬಿ) ತಿಂದಾಳು

(ಸಿ) ತಿನ್ನಳು (ಡಿ) ತಿನ್ನುವಳು

55. ಕಾವ್ಯವನ್ನು ವಾಚಿಸುವಾಗ ಅರ್ಥಕ್ಕೆ ಲೋಪಬಾರದಂತೆ ನಿಲ್ಲಿಸುವ ಸ್ಥಳವನ್ನು ಹೀಗೆನ್ನುವರು

(ಎ) ಯತಿ (ಬಿ) ಪ್ರಾಸ

(ಸಿ) ಗಣ (ಡಿ) ಮಾತ್ರೆ

ಈ ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದದ ಸಂಬಂಧೀಪದವನ್ನು ಬರೆಯಿರಿ : $4 \times 1 = 4$

56. ಕಾರ್ಯ : ಕಜ್ಜ :: ಅಮೃತ : ......................... .

57. ಸಂಭೂತ : ಹುಟ್ಟಿದ :: ಸೈದರೆ : ........................ .

58. ಕೆನೆಮೊಸರು : ಜೋಡುನುಡಿ :: ಬಟ್ಟಬಯಲು : ........................ .

59. ಹೋಗಲಿಕ್ಕೆ : ಕೃದಂತಾವ್ಯಯ :: ಚಂದ್ರನಂತೆ : ........................ .

ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ : 1 × 3 = 3

60. ಕರುಕುಳನಂದನಂ ಪವನನಂದನನೆಂಬ ಮದಾಂಧಗಂಧಸಿಂ

***ಅಥವಾ***

ಎನಗಂ ಪಾಂಡುಗಮಿಲ್ಲ ಭೇದಮಿಳೆಯಂ ಪಚ್ಚಾಳ್ವಮಾ ಪಾಂಡುನಂ

ಈ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣದೊಂದಿಗೆ ಸಮನ್ವಯಗೊಳಿಸಿ : 1 × 3 = 3

61. ಸತಿಪತಿಗಳೊಂದಾಗದವನ ಭಕ್ತಿ ಅಮೃತದೊಳು ವಿಷಬೆರೆದಂತೆ

***ಅಥವಾ***

ನುಡಿದರೆ ಮುತ್ತಿನ ಹಾರದಂತಿರಬೇಕು

## ವಿಭಾಗ – 'ಸಿ'
## (ವಾಕ್ಯರಚನೆ ಹಾಗೂ ಬರೆವಣಿಗೆ ಕೌಶಲ)

62. ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ ***ಒಂದನ್ನು*** ವಿಸ್ತರಿಸಿ ಬರೆಯಿರಿ : 1 × 3 = 3

   * ಹಾಸಿಗೆ ಇದ್ದಷ್ಟು ಕಾಲುಚಾಚು
   * ಬೆಳ್ಳಗಿರುವುದೆಲ್ಲ ಹಾಲಲ್ಲ ; ಹೊಳೆಯುವುದೆಲ್ಲ ಚಿನ್ನವಲ್ಲ
   * ಬೆಳೆಯುವ ಸಿರಿ ಮೊಳಕೆಯಲ್ಲಿ

63. ನಿಮ್ಮನ್ನು ಮೈಸೂರಿನ ರಾಮಕೃಷ್ಣ ವಿದ್ಯಾಶಾಲೆಯ 'ವೇದಾಂತ' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ಆಚರಿಸಿದ 'ಭಾಷಾ ಮಾಸಾಚರಣೆ'ಯ ಕಾರ್ಯಕ್ರಮಗಳ ವರದಿಯನ್ನು ಪ್ರಕಟಿಸುವಂತೆ 'ಪ್ರಜಾವಾಣಿ' ದಿನಪತ್ರಿಕೆಯ ಸಂಪಾದಕರಿಗೆ ಮನವಿ ಪತ್ರ ಬರೆಯಿರಿ. 1 × 5 = 5

***ಅಥವಾ***

ನಿಮ್ಮನ್ನು ಶಿರಸಿಯ ಮಾರಿಕಾಂಬಾ ಪ್ರೌಢಶಾಲೆಯ 'ಸುಜಯ್' ಎಂದು ಭಾವಿಸಿಕೊಂಡು, ಮೈಸೂರಿನ ವಿಜಯನಗರ ಬಡಾವಣೆಯ ಗೆಳೆಯನಾದ 'ತೇಜಸ್ವಿಗೆ' ಶೈಕ್ಷಣಿಕ ಪ್ರವಾಸದ ವಿವರವನ್ನು ತಿಳಿಸಿ ಪತ್ರ ಬರೆಯಿರಿ.

64. ಈ ಕೆಳಗಿನ ಯಾವುದಾದರೂ ***ಒಂದು*** ವಿಷಯದಲ್ಲಿ ಹತ್ತು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ : 1 × 5 = 5

   * ಶಾಲಾ ಸಂಘಗಳ ಶೈಕ್ಷಣಿಕ ಕಾರ್ಯಕ್ರಮಗಳು
   * ಸ್ವಚ್ಛತಾ ಆಂದೋಲನ
   * ಜ್ಞಾನಾಭಿವೃದ್ಧಿಯಲ್ಲಿ ಗ್ರಂಥಾಲಯಗಳ ಪಾತ್ರ